ಕರ್ನಾಟಕ ಸರ್ಕಾರ
ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ನಿರ್ದೇಶನಾಲಯ
ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು-560 001.
ದೂ. 080-22372738 E-mail: nrega-ka@nic.in

[redacted]

ಸಂ: ಗ್ರಾಅಪ 08 ಮಗ್ರಾಂಉಖಾಯೋ 2008 ದಿನಾಂಕ : 05-10-2010

ಗೆ,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.

ಮಾನ್ಯರೆ,

ವಿಷಯ: ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರೈತರ ಜಮೀನಿನಲ್ಲಿ ಭೂಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಕುರಿತು, ಸ್ಪಷ್ಟೀಕರಣ ನೀಡುವ ಬಗ್ಗೆ.

ಉಲ್ಲೇಖ: 1.ಕೇಂದ್ರ ಸರ್ಕಾರದ ಆದೇಶ ಸಂಖ್ಯೆ 11060/3/2009- MGNREGA ದಿನಾಂಕ: 1-9-2009.
2.ಸರ್ಕಾರದ ಪತ್ರದ ಸಂಖ್ಯೆ ಗ್ರಾಅಪ 08 ಉಖಾಯೋ 2008 ದಿನಾಂಕ: 10-2-2010.

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ, ರೈತರ ಜಮೀನಿನಲ್ಲಿ ಭೂ ಅಭಿವೃದ್ಧಿ ಕಾಮಗಾರಿಗಳನ್ನು ವೈಯುಕ್ತಿಕವಾಗಿ ತೆಗೆದುಕೊಳ್ಳಲು ಯಾವ ವರ್ಗದ ಜನರಿಗೆ, ಈ ಸೌಲಭ್ಯವನ್ನು ವಿಸ್ತರಿಸಬೇಕೆಂದು, ಹಲವಾರು ಜಿಲ್ಲಾ ಪಂಚಾಯತ್‌ಗಳು ಈ ಸಂಬಂಧ ಸ್ಪಷ್ಟೀಕರಣ ನೀಡುವಂತೆ ಸರ್ಕಾರವನ್ನು ಕೋರುತ್ತಿರುತ್ತಾರೆ. ಈ ಸಂಬಂಧ, ಈಗಾಗಲೇ ಕೇಂದ್ರ ಸರ್ಕಾರವು ಉಲ್ಲೇಖ (1)ರಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಿದ್ದು ಅದರಂತೆ ಕ್ರಮವಹಿಸಿ ಅನುಷ್ಠಾನಗೊಳಿಸಲು ತಿಳಿಸಲಾಗಿರುತ್ತದೆ.

ಮಾರ್ಗಸೂಚಿಗಳ ಪ್ರಕಾರ, ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದ ರೈತರಿಗೆ ಮತ್ತು ಸಣ್ಣ ಹಾಗೂ ಅತಿ ಸಣ್ಣ ರೈತರಿಗೆ ರೈತರ ಜಮೀನಿನಲ್ಲಿ ವೈಯುಕ್ತಿಕ ಭೂ ಅಭಿವೃದ್ಧಿ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶವಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಕೃಷಿಕರನ್ನು ಆದ್ಯತೆ ಮೇರೆಗೆ ಪರಿಗಣಿಸಿದ ನಂತರ, ಸಣ್ಣ ರೈತರು ಮತ್ತು ಅತಿ ಸಣ್ಣರೈತರಿಗೆ, ಈ ಸೌಲಭ್ಯವನ್ನು ಒದಗಿಸಲು ತಿಳಿಸಿರುತ್ತದೆ. ಅದರಂತೆ ಕ್ರಮ ಜರುಗಿಸಲು ಈ ಮೂಲಕ ತಿಳಿಸಲಾಗಿದೆ.

2040

ತಮ್ಮ ವಿಶ್ವಾಸಿ,

(ಎನ್.ಎಸ್.ಪ್ರಸನ್ನಕುಮಾರ್)
ನಿರ್ದೇಶಕರು,
ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ
ಉದ್ಯೋಗ ಖಾತರಿ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಜಿಲ್ಲಾ ಪಂಚಾಯತ್ ಕಾರ್ಯಾಲಯ
ಉತ್ತರ ಕನ್ನಡ ಕಾರವಾರ
18 OCT 2010
ದಿನಾಂಕ: ವಿಷಯ
ಅಧಿ. ಮುಕಾ.

829